# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :900**
**ಮಾನ್ಯ ಸದಸ್ಯರ ಹೆಸರು : ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭಾ ಕ್ಷೇತ್ರ)**
**ಉತ್ತರಿಸಬೇಕಾದ ದಿನಾಂಕ : 15.12.2025**
**ಉತ್ತರಿಸಬೇಕಾದ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಆರೋಗ್ಯ ಇಲಾಖೆಯಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಶುಶ್ರೂಷಕರುಗಳು ಹಾಗೂ ಗೌರವಧನ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಆಶಾ ಕಾರ್ಯಕರ್ತೆಯರು ಖಾಯಂಗೊಳಿಸಲು ಹೋರಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ. ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು. ಇವರನ್ನು ಯಾವಾಗ ಖಾಯಂಗೊಳಿಸಲಾಗುವುದು; (ಮಾಹಿತಿ ನೀಡುವುದು) | • ರಾಷ್ಟ್ರೀಯ ಆರೋಗ್ಯ ಅಭಿಯಾನವು ಕೇಂದ್ರ ಸರ್ಕಾರದ ಯೋಜನೆಯಾಗಿದ್ದು, ಆರೋಗ್ಯ ಕ್ಷೇತ್ರವನ್ನು ಬಲಪಡಿಸುವ ಒಂದು ಪ್ರಮುಖ ಸುಧಾರಣಾ ಉಪ ಕ್ರಮವಾಗಿದೆ. ಆರೋಗ್ಯ ಇಲಾಖೆಯ ವಿವಿಧ ಕಾರ್ಯಕ್ರಮಗಳಿಗೆ ಪೂರಕವಾಗಿ ಯೋಜನೆಗಳನ್ನು ತ್ವರಿತವಾಗಿ ಕಾರ್ಯಗತಗೊಳಿಸುವ ಸಲುವಾಗಿ ಗುತ್ತಿಗೆ/ ಹೊರಗುತ್ತಿಗೆ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ನೇಮಕಾತಿ ಮಾಡಲಾಗಿರುತ್ತದೆ. |
| ಆ) | ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ವೈದ್ಯರು ಸೇರಿದಂತೆ ಇತರೆ ಅಧಿಕಾರಿ ನೌಕರರನ್ನು ಈಗಾಗಲೇ ಖಾಯಂಗೊಳಿಸಲಾಗಿದ್ದು, ಶುಶ್ರೂಷಕರುಗಳು ಹಾಗೂ ಆಶಾಕಾರ್ಯಕರ್ತೆಯರನ್ನು ಖಾಯಂಗೊಳಿಸದಿರುವುದಕ್ಕೆ ಕಾರಣವೇನು; ಇವರುಗಳನ್ನು ಖಾಯಂಗೊಳಿಸಲು ಸರ್ಕಾರದ ಹಂತದಲ್ಲಿ ಚಿಂತನೆ ಇದೆಯೇ (ಮಾಹಿತಿ ನೀಡುವುದು); | • ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯಡಿಯಲ್ಲಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಂಡಿರುವುದರಿಂದ ಖಾಯಂಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.<br>• ಆಶಾ ಕಾರ್ಯಕರ್ತೆರು ಮಾನ್ಯತೆ ಪಡೆದ ಸಾಮಾಜಿಕ ಆರೋಗ್ಯ ಕಾರ್ಯಕರ್ತೆಯಾಗಿದ್ದು, ಸ್ವಯಂ ಪ್ರೇರಿತ ನೆಲೆಗಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.<br>• ಆಶಾ ಕಾರ್ಯಕರ್ತೆಯರ ಕಾರ್ಯಚಟುವಟಿಕೆಗಳು ಸಂಪೂರ್ಣವಾಗಿ ಅರೆಕಾಲಿಕವಾಗಿದ್ದು, ಪೂರ್ಣಕಾಲಿಕ ಸ್ವರೂಪದಲ್ಲಿರುವುದಿಲ್ಲ. ಇವರಿಗೆ ನೀಡುವ ಗೌರವಧನ/ ಪ್ರೋತ್ಸಾಹಧನವು ಸಂಪೂರ್ಣವಾಗಿ ಕಾರ್ಯನಿರ್ವಹಣೆಗೆ ಒಳಪಟ್ಟಿರುತ್ತದೆ.<br>• ಆಶಾ ಕಾರ್ಯಕರ್ತೆಯರ ಸೇವೆಯು ಸ್ವಯಂ ಪ್ರೇರಿತ ನೆಲೆಗಟ್ಟಿನಲ್ಲಿರುವುದರಿಂದ ಇವರನ್ನು ಖಾಯಂ ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ ಹಾಗೂ ಈ ಬಗ್ಗೆ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

| | | |
|---|---|---|
| ಇ) | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶುಶ್ರೂಷಕರುಗಳಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು) | ರಾಷ್ಟ್ರೀಯ ಆರೋಗ್ಯ ಅಭಿಯಾನವು ಕೇಂದ್ರ ಸರ್ಕಾರದ ಪ್ರಾಯೋಜಿತ ಕಾರ್ಯಕ್ರಮವಾಗಿದ್ದು, ಕೇಂದ್ರ ಸರ್ಕಾರದ ಅನುಮೋದಿತ Rop ಯಂತೆ ಹಾಗೂ ಕನಿಷ್ಟ ವೇತನ ಕಾಯ್ದೆಯಂತೆ ಶುಶ್ರೂಷಧಿಕಾರಿಗಳಿಗೆ ಮಾಹೆವಾರು ವೇತನ ನೀಡಲಾಗುತ್ತಿದೆ. |

**ಸಂಖ್ಯೆ: ಆಕುಕ 152 ಎಸ್‌ಟಿಕ್ಯೂ 2025**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು